ಮುದ್ದೇಬಿಹಾಳ್ ತಾಲ್ಲೂಕು ನಲತ್ತವಾಡ ಗ್ರಾಮಕ್ಕೆ ಕುಡಿಯುವ ನೀರಿನ ಯೋಜನೆ

896 - ಶ್ರೀ ಎ.ಎಸ್. ನಾಡಗೌಡ (ಅಪ್ಪಾಜಿ) (ಮುದ್ದೇಬಿಹಾಳ) : ಮಾನ್ಯ ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

1. *ಕೃಷ್ಣ ಮೇಲ್ದಂಡೆ ಪುನರ್ವಸತಿ ಯೋಜನೊಯಡಿಯಲ್ಲಿ ಬಿಜಾಪುರ ಜಿಲ್ಲೆ ಮುದ್ದೇಬಿಹಾಳ್ ತಾಲ್ಲೂಕು ನಲತ್ತವಾಡ ಗ್ರಾಮಕ್ಕೆ ಕುಡಿಯುವ ನೀರಿನ ಯೋಜನೆ ಪ್ರಾರಂಭಿಸುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ?*
2. *ಬಂದಿದ್ದಿಲ್ಲಿ, ಈ ಯೋಜನೆಯು ಯಾವಾಗ ಪ್ರಾರಂಭವಾಗುವುದು?*
3. *ಅದಕ್ಕೆ ತಗಲುವ ವೆಚ್ಚ ಮತ್ತು ಎಷ್ಟು ಅವಧಿಯೊಳಗೆ ಪೂರ್ಣಗೊಳಿಸಲಾಗುವುದು?*

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

1. ಇಲ್ಲ.

2. ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

ಜಿಲ್ಲಾಪರಿಷತ್ತಿನಿಂದ ಪಡೆದ ರಸ್ತೆಗಳ ಅಭಿವೃದ್ಧಿ.

266 -ಶ್ರೀ ಕೆ. ಸೋಮಪ್ಪ ಸುವರ್ಣ (ಮೂಡಬಿದ್ರೆ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) *ಜಿಲ್ಲಾಪರಿಷತ್ತಿನಿಂದ ಪಡೆದುಕೊಂಡ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ?*

ಆ) *ರಸ್ತೆಗಳು ತೀರಾ ಹಾಳಾಗಿದ್ದು ಅವುಗಳ ಅಭಿವೃದ್ಧಿ ಕೂಡಲೇ ಆಗಬೇಕಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?*

ಇ) *ಬಂದಿದ್ದಲ್ಲಿ, ಅವುಗಳ ತರ್ತು ದುರಸ್ತಿಗಾಗಿ ಸರ್ಕಾರವು ಏನು ಕ್ರಮ ಕೈಗೊಂಡಿದೆ?*

ಶ್ರೀ. ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಮಂತ್ರಿಗಳು) :

ಅ) ಜಿಲ್ಲಾಪರಿಷತ್ತಿನಿಂದ ಪಡೆದುಕೊಂಡ 10,000 ಕಿಮೀ. ರಸ್ತೆಯನ್ನು 10 ವರ್ಷಗಳ ಅವಧಿಯಲ್ಲಿ ಮುಖ್ಯ ಜಿಲ್ಲಾ ರಸ್ತೆಯ ಮಟ್ಟಕ್ಕೆ ಅಭಿವೃದ್ಧಿಪಡಿಸುವುದಕ್ಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. 1993-94ನೇ ಸಾಲಿನಿಂದ ಅಭಿವೃದ್ಧಿಯ ಕಾಮಗಾರಿಯನ್ನು ತೆಗೆದುಕೊಳ್ಳಲಾಗುವುದು.

ಆ) ಗಮನಕ್ಕೆ ಬಂದಿದೆ.

ಇ) ಈ ರಸ್ತೆಗಳ ನಿರ್ವಹಣೆಗೆ ಅನುದಾನ ಬಿಡುಗಡೆಯಾದ ನಂತರ ವ್ಯಾಪಕ ದುರಸ್ತಿಯನ್ನು ತೆಗೆದುಕೊಳ್ಳಲಾಗುವುದು. ತಕ್ಷಣದಲ್ಲಿ ಅತ್ಯಂತ ಕೆಟ್ಟು ಹೋದ ಭಾಗಗಳನ್ನು ತುರ್ತು ದುರಸ್ತಿ ಮಾಡುವಂತೆ ಮುಖ್ಯ ಇಂಜಿನಿಯರ್‌ರವರುಗಳಿಗೆ ಈಗಾಗಲೇ ಸೂಚನೆಯನ್ನು ನೀಡಲಾಗಿದೆ.